ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ___

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 6/2/2020

6/2/20

ದೂರ ಉಳಿದ ಕಾಂಗ್ರೆಸ್, ಜೆಡಿಎಸ್ | ಫೆಬ್ರವರಿ 10 ಅಧಿಕೃತ ಘೋಷಣೆ

# ಮೇಲ್ಮನೆಗೆ ಬಿಜೆಪಿಯಿಂದ ಸವದಿ ನಾಮಪತ್ರ

**ವಿಕ ಸುದ್ದಿಲೋಕ** ಬೆಂಗಳೂರು

ರಾಜ್ಯ ವಿಧಾನಸಭೆಯಿಂದ ವಿಧಾನಸಭೆಯ ಒಂದು ಸ್ಥಾನಕ್ಕೆ ನಡೆಯಲಿರುವ ಉಪಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಡಿಸಿಎಂ ಲಕ್ಷ್ಮಣ ಸವದಿ ಅವರು ಬುಧವಾರ ನಾಮಪತ್ರ ಸಲ್ಲಿಸಿದರು.

ಚುನಾವಣಾಧಿಕಾರಿಯೂ ಆದ ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಅವರಿಗೆ ಸವದಿ ದ್ವಿಪ್ರತಿಯಲ್ಲಿ ನಾಮಪತ್ರ ಸಲ್ಲಿಸಿದರು. ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟನೆಗಾಗಿ ಕಲಬುರಗಿಗೆ ತೆರಳಬೇಕಿದ್ದ ಕಾರಣ ಸಿಎಂ ಬಿ. ಎಸ್.ಯಡಿಯೂರಪ್ಪ ಅವರು ಈ ಸಂದರ್ಭದಲ್ಲಿ ಗೈರು ಹಾಜರಾದರು.

ಡಿಸಿಎಂ ಡಾ.ಅಶ್ವತ್ಥ ನಾರಾಯಣ, ಸಚಿವರಾದ ಆರ್.ಅಶೋಕ್, ಬಸವರಾಜ ಬೊಮ್ಮಾಯಿ, ಸಿ.ಸಿ.ಪಾಟೀಲ್, ಅಶೋಕ್, ಮಾಧುಸ್ವಾಮಿ, ವಿ. ಸೋಮಣ್ಣ, ಕೋಟಾ ಶ್ರೀನಿವಾಸ ಪೂಜಾರಿ, ಶಶಿಕಲಾ ಜೊಲ್ಲೆ, ಶಾಸಕರಾದ ಉಮೇಶ್ ಕತ್ತಿ, ಮಹೇಶ್ ಕಮಟಳ್ಳಿ, ಶ್ರೀಮಂತ ಪಾಟೀಲ್, ಅಭಯ್ ಪಾಟೀಲ್ ಸೇರಿದಂತೆ ಬಿಜೆಪಿಯ ಹಲವು ಶಾಸಕರು ಮತ್ತು ಮುಖಂಡರು ಹಾಜರಿದ್ದರು.



ವಿಧಾನ ಪರಿಷತ್ತಿನ ಒಂದು ಸ್ಥಾನಕ್ಕಾಗಿ ಡಿಸಿಎಂ ಲಕ್ಷ್ಮಣ್ ಸವದಿ ಅವರು ವಿಧಾನ ಸಭೆ ಕಾರ್ಯದರ್ಶಿ ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು. ಡಿಸಿಎಂ ಅಶ್ವತ್ಥ್ ನಾರಾಯಣ್, ಸಿ. ಸಿ. ಪಾಟೀಲ್, ಶಶಿಕಲಾ ಜೊಲ್ಲೆ, ಕೋಟ ಶ್ರೀನಿವಾಸ್ ಪೂಜಾರಿ, ಆರ್. ಅಶೋಕ್ ಹಾಜರಿದ್ದರು.

**ಅವಿರೋಧ ಆಯ್ಕೆ ಖಚಿತ**

ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಆಯ್ಕೆಯಾಗಿರುವ ರಿಜ್ವಾನ್ ಅರ್ಷದ್ ರಾಜೀನಾಮೆಯಿಂದ ಮೇಲ್ಮನೆಯ ಈ ಸ್ಥಾನ ತೆರವಾಗಿತ್ತು. ಆಡಳಿತಾರೂಢ ಬಿಜೆಪಿಗೆ ವಿಧಾನಸಭೆಯಲ್ಲಿ ಸ್ಪಷ್ಟ ಸಂಖ್ಯಾಬಲ ಇರುವ ಕಾರಣ ಪ್ರತಿಪಕ್ಷ ಕಾಂಗ್ರೆಸ್ ಮತ್ತು ಜೆಡಿಎಸ್ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಸಾಧ್ಯತೆ ಇಲ್ಲ. ತಮಿಳುನಾಡು ಸೇಲಂ ಮೂಲದ ಡಾ.ಕೆ.ಪದ್ಮರಾಜನ್ ಅವರು ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ. ಆದರೆ, ನಿಯಮಾವಳಿಯಂತೆ ಅಭ್ಯರ್ಥಿಕೆಗೆ 10 ಶಾಸಕರು ಸೂಚಕರಾಗಿ ಸಹಿ ಮಾಡಿಲ್ಲ. ಹೀಗಾಗಿ, ಪಕ್ಷೇತರ ಅಭ್ಯರ್ಥಿಯ ನಾಮಪತ್ರ ತಿರಸ್ಕೃತಗೊಳ್ಳುವ ಸಾಧ್ಯತೆ ಇದ್ದು, ಸವದಿ ಅವಿರೋಧ ಆಯ್ಕೆ ಬಹುತೇಕ ಖಚಿತವಾಗಿದೆ. ಫೆ.10 ಉಮೇದುವಾರಿಕೆ ಹಿಂಪಡೆಯಲು ಕೊನೆಯ ಕಾಲಾವಕಾಶವಿದ್ದು, ಅದೇ ದಿನ ಲಕ್ಷ್ಮಣ ಸವದಿ ಅವಿರೋಧ ಆಯ್ಕೆ ಘೋಷಣೆಯಾಗುವ ಸಾಧ್ಯತೆಗಳಿವೆ.

**ಪಕ್ಷಕ್ಕೆ ಕೃತಜ್ಞತೆ**

ನಾಮಪತ್ರ ಸಲ್ಲಿಕೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸವದಿ ''ಕಳೆದ ಐದೂವರೆ ತಿಂಗಳಿಂದ ಡಿಸಿಎಂ ಆಗಿ ಸೇವೆ ಸಲ್ಲಿಸುತ್ತಿದ್ದು, ಈ ತಿಂಗಳ 19 ರೊಳಗೆ ವಿಧಾನಸಭೆ ಅಥವಾ ಮೇಲ್ಮನೆ ಪೈಕಿ ಒಂದು ಸದನ ಪ್ರವೇಶ ಅನಿವಾರ್ಯವಾಗಿತ್ತು. ಇದಕ್ಕೆ ಅವಕಾಶ ನೀಡಿದ ಬಿಜೆಪಿ ವರಿಷ್ಠರು, ಸಿಎಂ ಬಿಎಸ್‌ವೈ ಹಾಗೂ ಪಕ್ಷದ ನಾಯಕರಿಗೆ ಕೃತಜ್ಞತೆಗಳು'' ಎಂದರು.